# All India Radio: Bangalore
# National Bulletin In Kannada
# 15.01.2026  19.35 p.m.
## ಆಕಾಶವಾಣಿ, ಬೆಂಗಳೂರು
## ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

೧. ಯೂರೋಪಿಯನ್ ಕೌನ್ಸಿಲ್ ಮತ್ತು ಕಮಿಷನ್ ಅಧ್ಯಕ್ಷರು ಈ ವರ್ಷದ ಗಣರಾಜ್ಯೋತ್ಸವ ಸಮಾರಂಭದ ಮುಖ್ಯ ಅತಿಥಿಗಳು

೨. ಶಿಕ್ಷಣಕ್ಕೆ ಕೊಡುಗೆ ನೀಡಿದ ಸಮಾಜಕ್ಕೆ ಋಣಿಯಾಗಿರುವಂತೆ ರಾಷ್ಟ್ರಪತಿ ದ್ರೌಪದಿ ಮುರ್ಮು ಕರೆ

೩. ನಾಡಿನೆಲ್ಲೆಡೆ ಸಡಗರ-ಸಂಭ್ರಮದಿಂದ ಸುಗ್ಗಿ ಹಬ್ಬ ಆಚರಣೆ

೪. ಇಂಡಿಯಾ ಓಪನ್ ಬ್ಯಾಡ್ಮಿಂಟನ್ : ಪುರುಷರ ಸಿಂಗಲ್ಸ್ ಕ್ವಾರ್ಟರ್ ಫೈನಲ್ಸ್ ಪ್ರವೇಶಿಸಿದ ಭಾರತದ ಲಕ್ಷ್ಯ ಸೇನ್

***************

ಈ ವರ್ಷದ ಜನವರಿ ೨೬ ರಂದು ನವದೆಹಲಿಯ ಕರ್ತವ್ಯಪಥದಲ್ಲಿ ನಡೆಯಲಿರುವ ೭೭ನೇ ಗಣರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಯೂರೋಪಿಯನ್ ಕೌನ್ಸಿಲ್ ಅಧ್ಯಕ್ಷ ಆಂಟೋನಿಯೊ ಲೂಯಿಸ್ ಸ್ಯಾಂಟೋಸ್ ಡ ಕೋಸ್ಟಾ ಮತ್ತು ಯೂರೋಪಿಯನ್ ಕಮಿಷನ್ ಅಧ್ಯಕ್ಷೆ ಉರ್ಸುಲಾ ವಾನ್ ಡೆರ್ ಲೇಯೆನ್ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಆಹ್ವಾನದ ಮೇರೆಗೆ ಇಬ್ಬರೂ ನಾಯಕರು ಜನವರಿ ೨೫ ರಿಂದ ಭಾರತಕ್ಕೆ ಮೂರು ದಿನಗಳ ಭೇಟಿ ನೀಡಲಿದ್ದು, ಇದೇ ೨೭ ರಂದು ನಡೆಯಲಿರುವ ೧೬ನೇ ಭಾರತ-ಯೂರೋಪಿಯನ್ ಒಕ್ಕೂಟದ ಶೃಂಗಸಭೆಯ ಸಹ ಅಧ್ಯಕ್ಷತೆ ವಹಿಸಲಿದ್ದಾರೆ. ಇಬ್ಬರೂ ನಾಯಕರೂ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಭೇಟಿ ಮಾಡಲಿದ್ದು, ಪ್ರಧಾನಿ ಮೋದಿ ಅವರೊಂದಿಗೆ ನಿಯೋಗ ಮಟ್ಟದ ಮಾತುಕತೆ ನಡೆಸಲಿದ್ದಾರೆ.

ಭಾರತ-ಯುರೋಪ್ ಒಕ್ಕೂಟ ಶೃಂಗಸಭೆಯ ನೇಪಥ್ಯದಲ್ಲಿ ಭಾರತ-ಯುರೋಪ್ ಒಕ್ಕೂಟದ ವ್ಯಾಪಾರ ವೇದಿಕೆಯನ್ನು ಸಹ ಆಯೋಜಿಸುವ ನಿರೀಕ್ಷೆಯಿದೆ.  ಭಾರತ ಮತ್ತು ಯೂರೋಪಿಯನ್ ಒಕ್ಕೂಟ ೨೦೦೪ ರಿಂದ ಕಾರ್ಯತಂತ್ರ ಪಾಲುದಾರ ರಾಷ್ಟ್ರಗಳಾಗಿದ್ದು ಗಣರಾಜ್ಯೋತ್ಸವ ಮತ್ತು ಭಾರತ-ಯುರೋಪ್ ಒಕ್ಕೂಟ ಶೃಂಗಸಭೆಯಲ್ಲಿನ ಪಾಲ್ಗೊಳ್ಳುವಿಕೆಯು ಕಾರ್ಯತಂತ್ರದ ಪಾಲುದಾರಿಕೆಯನ್ನು ಮತ್ತಷ್ಟು ಗಾಢವಾಗಿಸಲಿದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯ ಹೇಳಿದೆ.

***************

ಶಿಕ್ಷಣವು ಕೇವಲ ಜೀವನೋಪಾಯದ ಮಾರ್ಗವಲ್ಲ, ಅದು ಸಮಾಜ ಮತ್ತು ದೇಶಕ್ಕೆ ಸೇವೆ ಸಲ್ಲಿಸುವ ಮಾರ್ಗವೂ ಆಗಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ.  ಪಂಜಾಬ್‌ನ ಅಮೃತ್‌ಸರದಲ್ಲಿರುವ ಗುರುನಾನಕ್ ದೇವ್ ವಿಶ್ವವಿದ್ಯಾಲಯದ ೫೦ನೇ ಘಟಿಕೋತ್ಸವದಲ್ಲಿ ಮಾತನಾಡಿದ ಅವರು, ತಮ್ಮ ಶಿಕ್ಷಣಕ್ಕಾಗಿ ಕೊಡುಗೆ ನೀಡಿರುವ ಸಮಾಜಕ್ಕೆ ವಿದ್ಯಾರ್ಥಿಗಳು ಋಣಿಯಾಗಿರಬೇಕು ಎಂದು ಕಿವಿ ಮಾತು ಹೇಳಿದರು.

ಔಪಚಾರಿಕ ಶಿಕ್ಷಣ ಪೂರ್ಣಗೊಳಿಸಿದ ನಂತರ ಉದ್ಯೋಗಕ್ಕೆ ಸೇರುವುದು ಅಥವಾ ಸ್ವಂತ ಉದ್ಯಮ ಆರಂಭಿಸುವುದು ವಾಡಿಕೆ. ಇದರ ಜೊತೆಗೆ ಎಲ್ಲ ವಲಯಗಳ ಅಭಿವೃದ್ಧಿಗೆ ಮತ್ತು ದುರ್ಬಲ ವರ್ಗದವರ ಅಭ್ಯುದಯಕ್ಕೆ ನೆರವಾಗುವಂತಹ ಕಾರ್ಯಗಳಲ್ಲಿ ತೊಡಗಬೇಕು ಎಂದು ಸಲಹೆ ನೀಡಿದರು. ಸಮಾಜದಲ್ಲಿ ಹೆಣ್ಣು ಮಕ್ಕಳಿಗೆ ಸಮಾನ ಸ್ಥಾನಮಾನ ನೀಡಬೇಕೆಂಬ ಗುರುನಾನಕ್ ದೇವ್ ಅವರ ಬೋಧನೆಗಳನ್ನು ಅನುಸರಿಸಿರುವ ವಿಶ್ವವಿದ್ಯಾಲಯದ ಕ್ರಮಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದ ರಾಷ್ಟ್ರಪತಿಗಳು, ದೇಶದ ಹಿತಾಸಕ್ತಿಯಿಂದ ಮಹಿಳೆಯರಿಗೆ ಸಮಾನ ಅವಕಾಶ ಸಿಗಬೇಕು ಎಂದು ತಿಳಿಸಿದರು.

***************

ನವದೆಹಲಿಯ ಭಾರತ ಮಂಟಪದಲ್ಲಿ ನಾಳೆ ನಡೆಯಲಿರುವ ಸ್ಟಾರ್ಟ್‌ಅಪ್ ಇಂಡಿಯಾ ಉಪಕ್ರಮದ ದಶಮಾನೋತ್ಸವ ಕಾರ್ಯಕ್ರಮದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ಉಪಕ್ರಮದ ಸಾಧನೆಯ ಪಯಣದ ಬಗ್ಗೆ ತಿಳಿಸಲಿದ್ದಾರೆ. ಭಾರತದ ನವೋದ್ಯಮಿಗಳೊಂದಿಗೆ ಪ್ರಧಾನಮಂತ್ರಿ ಸಂವಾದ ನಡೆಸಲಿದ್ದು, ಆಯ್ದ ನವೋದ್ಯಮಗಳ ಪ್ರತಿನಿಧಿಗಳು ತಮ್ಮ ಉದ್ಯಮಶೀಲತಾ ಪ್ರಯಾಣದ ಒಳನೋಟಗಳನ್ನು ಹಂಚಿಕೊಳ್ಳಲಿದ್ದಾರೆ. ನಾವಿನ್ಯತೆಯನ್ನು ಪೋಷಿಸಲು, ಉದ್ಯಮಶೀಲತೆಯನ್ನು ಉತ್ತೇಜಿಸಲು ಸ್ಟಾರ್ಟ್‌ಅಪ್ ಇಂಡಿಯಾ ಉಪಕ್ರಮಕ್ಕೆ ಪ್ರಧಾನಮಂತ್ರಿಗಳು ೨೦೧೬ರ ಜನವರಿ ೧೬ರಂದು ರಂದು ಚಾಲನೆ ನೀಡಿದ್ದರು.

***************

ಪ್ರಜಾಪ್ರಭುತ್ವಕ್ಕೆ ಸ್ಥಿರತೆ, ವೇಗ ದೊರೆತಿರುವುದು ಪ್ರಜಾಸತ್ತಾತ್ಮಕ ಸಂಸ್ಥೆಗಳು ಮತ್ತು ಪ್ರಕ್ರಿಯೆಗಳಿಂದ ಎಂಬುದನ್ನು ಭಾರತ ತೋರಿಸಿದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಹೇಳಿದ್ದಾರೆ. ನವದೆಹಲಿಯಲ್ಲಿ ಇಂದು ಕಾಮನ್‌ವೆಲ್ತ್‌ನ ಸ್ಪೀಕರ್‌ಗಳು ಮತ್ತು ಪೀಠಾಸೀನಾಧಿಕಾರಿಗಳ ಸಮ್ಮೇಳನವನ್ನುದ್ದೇಶಿಸಿ ಮಾತನಾಡಿದ ಅವರು, ಭಾರತವು ವೈವಿಧ್ಯತೆಯನ್ನು ತನ್ನ ಪ್ರಜಾಪ್ರಭುತ್ವದ ಶಕ್ತಿಯನ್ನಾಗಿ ಪರಿವರ್ತಿಸಿದೆ ಎಂದು ಹೇಳಿದರು. ಭಾರತದಲ್ಲಿ ಪ್ರಜಾಪ್ರಭುತ್ವ ಎಂದರೆ ಕಟ್ಟಕಡೆಯ ವ್ಯಕ್ತಿಗೂ ಎಲ್ಲ ಸೌಕರ್ಯಗಳನ್ನು ತಲುಪಿಸುವುದು. ಈ ನಿಟ್ಟಿನಲ್ಲಿ ಯಾವುದೇ ತಾರತಮ್ಯವಿಲ್ಲದೆ ಸಾರ್ವಜನಿಕ ಕಲ್ಯಾಣದ ಮನೋಭಾವದೊಂದಿಗೆ ಸರ್ಕಾರ ಕಾರ್ಯ ಪ್ರವೃತ್ತವಾಗಿದೆ. ಕಳೆದ ಕೆಲವು ವರ್ಷಗಳಿಂದ ಭಾರತದಲ್ಲಿ ಸುಮಾರು ೨೫ ಕೋಟಿ ಜನರು ಬಡತನದಿಂದ ಹೊರಬಂದಿದ್ದಾರೆ ಎಂದು ಮೋದಿ ವಿವರಿಸಿದರು.

***************

ಕಾಮನ್‌ವೆಲ್ತ್ ಸದಸ್ಯ ರಾಷ್ಟ್ರಗಳೊಂದಿಗೆ ತನ್ನ ಸದೃಢ ಡಿಜಿಟಲ್ ಸಾರ್ವಜನಿಕ ಮೂಲಸೌಕರ್ಯವನ್ನು ಹಂಚಿಕೊಳ್ಳಲು ಭಾರತ ಸಿದ್ಧವಾಗಿರುವ ಬಗ್ಗೆ ತಿಳಿಸುವ ಲೇಖನವನ್ನು ಪ್ರಧಾನಮಂತ್ರಿ ನರೇಂದ್ರ ಮೋದಿ ಹಂಚಿಕೊಂಡಿದ್ದಾರೆ.

ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಬರೆದಿರುವ ಈ ಲೇಖನವು ವಸುಧೈವ ಕುಟುಂಬಕಂ ಪರಿಕಲ್ಪನೆಗೆ ಭಾರತದ ಬದ್ಧತೆಯನ್ನು ಒತ್ತಿ ಹೇಳುತ್ತದೆ ಎಂದು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪ್ರಧಾನಮಂತ್ರಿ ತಿಳಿಸಿದ್ದಾರೆ.

ಈ ಲೇಖನವು ಕಾಮನ್‌ವೆಲ್ತ್ ರಾಷ್ಟ್ರಗಳಾದ್ಯಂತ ಪ್ರಜಾಪ್ರಭುತ್ವ ಸ್ಥಿತಿಸ್ಥಾಪಕತ್ವವನ್ನು ಬಲಪಡಿಸಲು ತನ್ನ ಡಿಜಿಟಲ್ ಸಾರ್ವಜನಿಕ ಮೂಲಸೌಕರ್ಯವನ್ನು ಹಂಚಿಕೊಳ್ಳುವ ಭಾರತದ ಆಶಯವನ್ನು ವಿವರಿಸುತ್ತದೆ.

***************

ನಾಡಿನೆಲ್ಲೆಡೆ ಮಕರ ಸಂಕ್ರಾಂತಿ ಹಬ್ಬವನ್ನು ಸಡಗರ ಸಂಭ್ರಮದಿಂದ ಆಚರಿಸಲಾಗುತ್ತಿದೆ. ಎಳ್ಳು, ಬೆಲ್ಲ ಬೀರುತ್ತಾ ಸಂಭ್ರಮದಿಂದ ಹಬ್ಬ ಆಚರಿಸುತ್ತಿರುವ ದೃಶ್ಯ ಸಾಮಾನ್ಯವಾಗಿದೆ. ರಾಸುಗಳನ್ನು ಅಲಂಕರಿಸಿ, ಕಿಚ್ಚು ಹಾಯಿಸಲು ಭರದ ಸಿದ್ಧತೆಗಳು ನಡೆದಿವೆ.

ವಿವಿಧ ದೇವಾಲಯಗಳಲ್ಲಿ ವಿಶೇಷ ಪೂಜಾ ಕೈಂಕರ್ಯಗಳು ಜರುಗಿವೆ. ಬೆಂಗಳೂರಿನ ಗವಿ ಗಂಗಾಧರೇಶ್ವರಸ್ವಾಮಿ ದೇವಾಲಯದಲ್ಲಿಂದು ಸಂಜೆ ಸೂರ್ಯರಶ್ಮಿ ಶಿವಲಿಂಗಕ್ಕೆ ಸ್ಪರ್ಶಿಸಿದ್ದು, ನೂರಾರು ಭಕ್ತರು ಇದನ್ನು ಕಣ್ತುಂಬಿಕೊಂಡರು.

ಗ್ರಾಮೀಣ ಪ್ರದೇಶಗಳಲ್ಲಿ ರೈತಾಪಿ ವರ್ಗದವರು, ಜಾನುವಾರುಗಳ ಮೈ ತೊಳೆದು ಪೂಜೆ ಸಲ್ಲಿಸಿದರು. ನಂತರ ಎಳ್ಳು-ಬೆಲ್ಲ ಬೀರುವ ಮೂಲಕ ಹಬ್ಬದ ಸಂಭ್ರಮವನ್ನು ಇಮ್ಮಡಿಗೊಳಿಸಿದರು.

ಉತ್ತರ ಕರ್ನಾಟಕದ ಕೆಲವೆಡೆ ಜನರು ರೊಟ್ಟಿ ಬುತ್ತಿಯೊಂದಿಗೆ ಜಿಲ್ಲೆಯ ಪ್ರವಾಸಿ ತಾಣಗಳಿಗೆ ಕುಟುಂಬ ಸಹಿತ ತೆರಳಿ ಸಂಕ್ರಾಂತಿಯ ಸಂಭ್ರಮದಲ್ಲಿ ಭಾಗಿಯಾದರು. ಹಲವೆಡೆ ವಿಶೇಷ ರಂಗೋಲಿ ಬಿಡಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

***************

ಹಂಪಿ ಉತ್ಸವವನ್ನು ವಿಜೃಂಭಣೆಯಿಂದ ಹಾಗೂ ವಿನೂತನವಾಗಿ ಆಚರಿಸಲು ಎಲ್ಲಾ ಸಿದ್ಧತೆ ಮಾಡಿಕೊಳ್ಳುವಂತೆ ವಿಜಯನಗರ ಜಿಲ್ಲಾ ಉಸ್ತುವಾರಿ ಸಚಿವ ಜಮೀರ್ ಅಹ್ಮದ್ ಖಾನ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಹಂಪಿ ಉತ್ಸವದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಮುಂದಿನ ತಿಂಗಳ ೧೩ ರಿಂದ ೧೫ರವರೆಗೆ ನಡೆಯಲಿರುವ ಹಂಪಿ ಉತ್ಸವಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಚಾಲನೆ ನೀಡಲಿದ್ದಾರೆ ಎಂದರು.

ಉತ್ಸವದ ಭಾಗವಾಗಿ ಕಲೆ, ಚಿತ್ರಕಲೆ, ವಾಸ್ತುಶಿಲ್ಪ, ಫಲಪುಷ್ಪ ಪ್ರದರ್ಶನ, ಸಾಹಸ ಕ್ರೀಡೆ, ಸುಗಮ ಸಂಗೀತ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮ ಆಯೋಜಿಸಲಾಗಿದ್ದು, ಅಗತ್ಯ ಸಿದ್ಧತೆ ಕೈಗೊಳ್ಳುವಂತೆ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

***************

ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಗುಜರಾತಿ ಭಾಷೆಯಲ್ಲಿ ಪ್ರಕಟಿಸಲಾಗಿರುವ ಆದಿಶಂಕರಾಚಾರ್ಯರ ಕೃತಿಗಳ ಸಂಗ್ರಹ ಪುಸ್ತಕವನ್ನು ಬಿಡುಗಡೆ ಮಾಡಿದರು. ಆದಿಶಂಕರಾಚಾರ್ಯ ಸಂಗ್ರಹ ಗ್ರಂಥಾವಳಿ ಬಿಡುಗಡೆ ಸಮಾರಂಭದಲ್ಲಿ ಮಾತನಾಡಿದ ಅವರು, ಈ ಪುಸ್ತಕದ ಸಂಪಾದನೆ ಮತ್ತು ಪ್ರಕಟಣೆ ಕಾರ್ಯವು ಡಾ.ಗೌತಮ್ ಪಟೇಲ್ ಅವರ ಸಾಧನೆ ಎಂದು ಬಣ್ಣಿಸಿದರು. ಸ್ವಾಮಿ ಅಖಂಡಾನಂದ ಅವರನ್ನು ಸ್ಮರಿಸಿದ ಶಾ, ರಾಜ್ಯ ನಿರ್ಮಾಣದಲ್ಲಿ ಸ್ವಾಮಿ ಅವರ ಪಾತ್ರವು ಪ್ರಮುಖ ಎಂದು ತಿಳಿಸಿದರು. ಗುಜರಾತಿ ಭಾಷೆಗೆ ತರ್ಜುಮೆಯಾಗಿರುವ ವಿವೇಕ ಚೂಡಾಮಣಿ ಪುಸ್ತಕವನ್ನು ಓದುವಂತೆ ಅಮಿತ್ ಶಾ ಯುವಜನರಿಗೆ ಮನವಿ ಮಾಡಿದರು.

***************

ನವದೆಹಲಿಯಲ್ಲಿ ಇಂದು ನಡೆದ ಇಂಡಿಯಾ ಓಪನ್ ಬ್ಯಾಡ್ಮಿಂಟನ್ ಪಂದ್ಯಾವಳಿಯ ಪುರುಷರ ಸಿಂಗಲ್ಸ್ ನಲ್ಲಿ ಭಾರತದ ಖ್ಯಾತ ಶಟ್ಲರ್ ಲಕ್ಷ್ಯ ಸೇನ್ ಕ್ವಾರ್ಟರ್ ಫೈನಲ್ ತಲುಪಿದ್ದಾರೆ. ಜಪಾನ್‌ನ ನಿಶಿಮೊಟೊ ಕೆಂಟಾ ಅವರನ್ನು ೧೬ನೇ ಸುತ್ತಿನ ಪಂದ್ಯದಲ್ಲಿ ೨೧-೧೯, ೨೧-೧೧ ನೇರ ಸೆಟ್‌ಗಳಿಂದ ಮಣಿಸಿದರು.

ಇದಕ್ಕೂ ಮೊದಲು, ಎಚ್.ಎಸ್. ಪ್ರಣಯ್ ಮತ್ತು ಕಿಡಂಬಿ  ಶ್ರೀಕಾಂತ್ ಇಬ್ಬರೂ ೧೬ನೇ ಸುತ್ತಿನ ಪಂದ್ಯಗಳಲ್ಲಿ ಸೋತು ಟೂರ್ನಿಯಿಂದ ನಿರ್ಗಮಿಸಿದರು.  ಪ್ರಣಯ್ ಸಿಂಗಾಪುರದ ಲೋಹ್ ಕೀನ್ ಯೂ ವಿರುದ್ಧ ೨೧-೧೮, ೧೯-೨೧, ೧೪-೨೧ ಅಂತರದಲ್ಲಿ ಸೋತರೆ, ಶ್ರೀಕಾಂತ್ ಫ್ರೆಂಚ್ ಆಟಗಾರ ಕ್ರಿಸ್ಟೊ ಪೊಪೊವ್ ವಿರುದ್ಧ ೧೪-೨೧, ೨೧-೧೭, ೧೭-೨೧ ಅಂತರದಲ್ಲಿ ಪರಾಭವಗೊಂಡರು. ಮಹಿಳೆಯರ ಸಿಂಗಲ್ಸ್‌ನಲ್ಲಿ ಭಾರತದ ಮಾಳ್ವಿಕಾ ಬನ್ಸೋಡ್ ೧೮-೨೧, ೧೫-೨೧ ಅಂತರದಲ್ಲಿ ಚೀನಾದ ಶಟ್ಲರ್ ಹಾನ್ ಯು ವಿರುದ್ಧ ಪರಾಭವಗೊಂಡರು.

***************

ನವಿ ಮುಂಬೈನ ಡಿವೈ ಪಾಟೀಲ್ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಮಹಿಳಾ ಪ್ರೀಮಿಯರ್ ಲೀಗ್ ಟಿ-ಟ್ವೆಂಟಿ ಕ್ರಿಕೆಟ್‌ನಲ್ಲಿ ಮುಂಬೈ ಇಂಡಿಯನ್ಸ್ ಮತ್ತು ಯುಪಿ ವಾರಿಯರ್ಸ್ ವನಿತೆಯರು ಮುಖಾಮುಖಿಯಾಗಿದ್ದಾರೆ. ಟಾಸ್ ಗೆದ್ದ ಯುಪಿ ವಾರಿಯರ್ಸ್ ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

***************

ಯೋಜನೆಗಳ ಒಟ್ಟುಗೂಡಿಸುವಿಕೆಯ ಮೂಲಕ ಅತಿ ಸಣ್ಣ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳ ವಲಯದಲ್ಲಿ ದಕ್ಷತೆ ಸಾಧಿಸುವುದು" ಎಂಬ ಶೀರ್ಷಿಕೆಯ ವರದಿಯನ್ನು ನೀತಿ ಆಯೋಗ ಇಂದು ಬಿಡುಗಡೆ ಮಾಡಿದೆ.

ನೀತಿ ಆಯೋಗದ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಬಿ ವಿ ಆರ್ ಸುಬ್ರಹ್ಮಣ್ಯಂ ನವದೆಹಲಿಯಲ್ಲಿ ಈ ವರದಿ ಬಿಡುಗಡೆ ಮಾಡಿ, ದೇಶದ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳಿಗೆ ಸರ್ಕಾರದ ಪರಿಣಾಮಕಾರಿ ಬೆಂಬಲಕ್ಕೆ ವರದಿಯು ಕಾರ್ಯತಂತ್ರದ ಮಾರ್ಗಸೂಚಿಯಾಗಿದೆ ಎಂದರು.

***************

ಥಾಯ್ಲೆಂಡ್‌ನಲ್ಲಿ ನಿನ್ನೆ ಸಂಭವಿಸಿದ ರೈಲು ದುರಂತದಲ್ಲಿ ಮೃತಪಟ್ಟವರ ಕುಟುಂಬಗಳಿಗೆ ವಿದೇಶಾಂಗ ವ್ಯವಹಾರಗಳ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ಸಂತಾಪ ಸೂಚಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಅವರು, ಗಾಯಾಳುಗಳು ಶೀಘ್ರ ಗುಣಮುಖರಾಗಲಿ ಎಂದು ಹಾರೈಸಿದ್ದಾರೆ.

********ಮುಕ್ತಾಯ*******